ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE: 21/02/2020

# ಮೇಲ್ಮನೆ ಮಾಜಿ ಸದಸ್ಯ ಆರ್.ಎಸ್.ಭಾಗ್ವತ್ ನಿಧನ

ಕುಮಟಾ: ವಿಧಾನಪರಿಷತ್ ಮಾಜಿ ಸದಸ್ಯ, ಸಹಕಾರಿ ಧುರೀಣ ಉತ್ತರ ಕನ್ನಡ ಜಿಲ್ಲೆಯ ಕುಮಟಾದ ಆರ್.ಎಸ್.ಭಾಗ್ವತ್ (89) ವಯೋಸಹಜ ಅನಾರೋಗ್ಯದಿಂದ ಗುರುವಾರ ನಿಧನ ಹೊಂದಿದರು. ಕುಮಟಾ ನ್ಯಾಯಾಲಯದಲ್ಲಿ ವಕೀಲ, ಕುಮಟಾ ಪುರಸಭೆ ಅಧ್ಯಕ್ಷ-ಉಪಾಧ್ಯಕ್ಷ, ಕುಮಟಾ ತಾಲೂಕು ಡೆವಲಪ್‌ಮೆಂಟ್ ಬೋರ್ಡ್ ಉಪಾಧ್ಯಕ್ಷ ಹಾಗೂ ಕೆನರಾ ಕಾಲೇಜು ಸೊಸೈಟಿಯ ಆಡಳಿತ ಮಂಡಳಿ ಅಧ್ಯಕ್ಷರಾಗಿಯೂ ಅವರು ಸೇವೆ ಸಲ್ಲಿಸಿದ್ದರು. ಉತ್ತರ ಕನ್ನಡ ಜಿಲ್ಲಾ ಸಹಕಾರಿ ಹೆಂಚಿನ ಕಾರ್ಖಾನೆ ಅಧ್ಯಕ್ಷ, ಕುಮಟಾ ಜೇನು ಸಾಕಾಣಿಕೆ ದಾರರ ಸಹಕಾರಿ ಸಂಘದ ಅಧ್ಯಕ್ಷ, ಉತ್ತರ ಕನ್ನಡ ಜಿಲ್ಲೆಯ ಮಧ್ಯವರ್ತಿ ಬ್ಯಾಂಕ್ ಆದ ಕೆಡಿಸಿಸಿ ಬ್ಯಾಂಕ್ ಅಧ್ಯಕ್ಷರೂ ಆಗಿದ್ದರು. ಕುಮಟಾ ತಾಲೂಕು ಪ್ರಾಥಮಿಕ ಸಹಕಾರಿ ಸಂಘ ವನ್ನೂ ಸ್ಥಾಪಿಸಿದ್ದ ಅವರು, ರಾಜ್ಯ ಸಹಕಾರಿ ಕೃಷಿ ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ನಿರ್ದೇಶಕ ಮತ್ತು ಉತ್ತರ ಕನ್ನಡ ಸಹ ಕಾರಿ ಯೂನಿಯನ್ ಅಧ್ಯಕ್ಷರಾಗಿಯೂ ದುಡಿದಿದ್ದರು.



27